# ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 266 ಗ್ರಾಪಂಕಾ 2014

ಕರ್ನಾಟಕ ಸರ್ಕಾರದ ಸಚಿವಾಲಯ
ಬಹುಮಹಡಿಗಳ ಕಟ್ಟಡ
ಬೆಂಗಳೂರು, ದಿನಾಂಕ: 17-06-2014

ಇವರಿಂದ:

ಸರ್ಕಾರದ ಕಾರ್ಯದರ್ಶಿ,
ಗ್ರಾಮೀಣ ಅಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ,
ಬೆಂಗಳೂರು.

ತುರ್ತು

ಇವರಿಗೆ:

ಎಲ್ಲಾ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
ಜಿಲ್ಲಾ ಪಂಚಾಯತಿ,

ಮಾನ್ಯರೆ,

ವಿಷಯ: ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ಹೊರಡಿಸುವ ಬಗ್ಗೆ.

ಉಲ್ಲೇಖ: ಕರ್ನಾಟಕ ಲೋಕ ಸೇವಾ ಆಯೋಗ ರವರ ಪತ್ರ ಸಂಖ್ಯೆ: E(3) 131/14-15/PSC ದಿನಾಂಕ:10-06-2014

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆಯಾಗಿರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಪಟ್ಟಿಯನ್ನು ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗದ ವೆಬ್‌ಸೈಟ್ ನಲ್ಲಿ ಪ್ರಕಟಿಸಲಾಗಿದೆ. ಉಲ್ಲೇಖಿತ ಪತ್ರದಲ್ಲಿ ಕರ್ನಾಟಕ ಲೋಕ ಸೇವಾ ಆಯೋಗವು ಸಹ ತಮ್ಮ ಜಿಲ್ಲಾ ಪಂಚಾಯತಿ ವ್ಯಾಪ್ತಿಯ ಆಯ್ಕೆ ಪಟ್ಟಿಯನ್ನು ತಮಗೆ ಅಧಿಕೃತವಾಗಿ ಕಳುಹಿಸಲು ಕ್ರಮ ವಹಿಸಿದೆ. ಖಾಲಿ ಇರುವ ದ್ವಿತೀಯ ದರ್ಜೆ ಲೆಕ್ಕ ಸಹಾಯಕರನ್ನು ತುರ್ತಾಗಿ ಭರ್ತಿ ಮಾಡಬೇಕಾಗಿರುವುದು ಅತ್ಯವಶ್ಯಕವಾಗಿರುತ್ತದೆ. ಆದಕಾರಣ ಈ ಆಯ್ಕೆ ಪಟ್ಟಿಯಲ್ಲಿರುವ ಅಭ್ಯರ್ಥಿಗಳಿಗೆ ಕರ್ನಾಟಕ ಸಿವಿಲ್ ಸೇವಾ (ಸಾಮಾನ್ಯ ನೌಕರಿ ಭರ್ತಿ) ನಿಯಮಗಳು, 1977 ರ ಅನುಸಾರ ಜರೂರಾಗಿ ನೇಮಕಾತಿ ಆದೇಶ ಹೊರಡಿಸಲು ಸೂಚಿಸಲಾಗಿದೆ.

1) ಸದರಿ ಪಟ್ಟಿಯಲ್ಲಿ ಆಯ್ಕೆಯಾಗಿರುವ ಅಭ್ಯರ್ಥಿಗಳಿಗೆ ಸಂಬಂಧಿಸಿದಂತೆ ಅರ್ಹತೆಯ ಪ್ರಮಾಣ ಪತ್ರಗಳನ್ನು ಮೂಲ ದಾಖಲೆಯೊಡನೆ ಪರಿಶೀಲಿಸಬೇಕು.
2) ಅಂಗವಿಕಲ ಮೀಸಲಾತಿಯಡಿ ಆಯ್ಕೆಯಾದ ಅಭ್ಯರ್ಥಿಗಳನ್ನು ನೇಮಕ ಮಾಡುವ ಮೊದಲು ವೈದ್ಯಕೀಯ ಪ್ರಮಾಣ ಪತ್ರದ ನೈಜತೆಯನ್ನು ವೈದ್ಯಕೀಯ ಮಂಡಳಿಯಿಂದ ಪರಿಶೀಲಿಸಬೇಕು.
3) ವಿವಿಧ ವರ್ಗದ ಮೀಸಲಾತಿಗಳನ್ನು ಕೋರಿದ್ದ ಅಭ್ಯರ್ಥಿಗಳ ಅರ್ಹತೆಯನ್ನು ಅವರ ಸಲ್ಲಿಸಿರುವ ಪ್ರಮಾಣ ಪತ್ರದ ಮೀಸಲಾತಿ ಬಗ್ಗೆ ಸಿಂಧುತ್ವ ಪ್ರಮಾಣ ಪತ್ರಗಳನ್ನು ಸಕ್ಷಮ ಪ್ರಾಧಿಕಾರದಿಂದ ಪಡೆದ ನಂತರವೇ ನೇಮಕಾತಿ ಮಾಡಿಕೊಳ್ಳಬೇಕು.
4) ಅಂತಿಮ ಆಯ್ಕೆ ಪಟ್ಟಿಯಲ್ಲಿ ವಿವಿಧ ಮೀಸಲಾತಿಯಡಿ ಆಯ್ಕೆ ಹೊಂದಿರುವ ಹಾಗೂ ಸದರಿ ಮೀಸಲಾತಿಯಿಂದ ರಿಯಾಯಿತಿ ಹೊಂದಿರುವ ಅಭ್ಯರ್ಥಿಗಳು ಸಲ್ಲಿಸಿರುವ ಪ್ರಮಾಣ ಪತ್ರಗಳು ಸಿಂಧುವೆ ಎಂಬ ಬಗ್ಗೆ ಸರ್ಕಾರಿ ಅಧಿಸೂಚನೆ ಸಂಖ್ಯೆ: SWL 247 SAD 90, ದಿನಾಂಕ: 22-02-1993 ರಲ್ಲಿ ಹೊರಡಿಸಿರುವ ಕರ್ನಾಟಕ ಪ.ಜಾ. /ಪ.ಪಂ... ಮತ್ತು ಇತರೆ ಹಿಂದುಳಿದ ವರ್ಗಗಳ (ನೇಮಕಾತಿ ಇತ್ಯಾದಿಗಳ ಮೀಸಲಾತಿ) ನಿಯಮ 1992 ರನ್ವಯ ಸಂಬಂಧಪಟ್ಟ ಪ್ರಾಧಿಕಾರದಿಂದ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆದ ನಂತರವೇ ಅಭ್ಯರ್ಥಿಗಳನ್ನು ಹುದ್ದೆಗಳಿಗೆ ನೇಮಕ ಮಾಡಿಕೊಳ್ಳಬೇಕು.

5) ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆ ಪಟ್ಟಿಯು ಸ್ವೀಕೃತಗೊಂಡ ತಕ್ಷಣ, ಅಭ್ಯರ್ಥಿಗಳು ತಮ್ಮ ಅರ್ಹತೆಗಾಗಿ ಮತ್ತು ಮೀಸಲಾತಿಗಾಗಿ ಸಲ್ಲಿಸಿರುವ ದಾಖಲೆಗಳ ಸಿಂಧುತ್ವ ಪ್ರಮಾಣ ಪತ್ರಗಳನ್ನು ಪಡೆಯಲು ಜಿಲ್ಲಾ ಸಮಾಜ ಕಲ್ಯಾಣ, ಜಿಲ್ಲಾ ಹಿಂದುಳಿದ ವರ್ಗಗಳ ಮತ್ತು ಅಲ್ಪಸಂಖ್ಯಾತರ ಇಲಾಖೆ ಹಾಗೂ ಅಂಗವಿಕಲರ ಇಲಾಖೆಯ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ಸುತ್ತೋಲೆಯೊಂದನ್ನು ಹೊರಡಿಸಿ, ಆಯ್ಕೆಗೊಂಡಿರುವ ಅಭ್ಯರ್ಥಿಗಳಿಗೆ ಸಂಬಂಧಿಸಿದ ಸಿಂಧುತ್ವ ಪ್ರಮಾಣ ಪತ್ರಗಳನ್ನು ತ್ವರಿತವಾಗಿ ನೀಡುವಂತೆ ಸೂಚಿಸುವುದು. ಈ ಸಂಬಂಧ ಒಂದು ಸುತ್ತಿನ ಸಭೆಯನ್ನು ಸಹ ಆಯೋಜಿಸಿ, ಈ ಬಗ್ಗೆ ಕೈಗೊಳ್ಳಬೇಕಾದ ಕ್ರಮಗಳನ್ನು ವಿವರಿಸುವುದು.

6) ಬೇರೆ ಜಿಲ್ಲೆಗೆ ಸೇರಿದ ಅಭ್ಯರ್ಥಿಗಳಿಗೆ ಸಂಬಂಧಿಸಿದ ಸಿಂಧುತ್ವ ಪ್ರಮಾಣ ಪತ್ರವನ್ನು ಪಡೆಯಲು, ಸಂಬಂಧಿಸಿದ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳಿಗೆ ತಕ್ಷಣವೇ ಪತ್ರವನ್ನು ಕಳುಹಿಸುವುದು. ಹಾಗೂ ಅವರುಗಳಿಂದ ತುರ್ತಾಗಿ ಸಿಂಧುತ್ವ ಪತ್ರವನ್ನು ಪಡೆಯಲು, ಸಂಬಂಧಿಸಿದ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೂ ಪತ್ರ ಬರೆದು ಅವರ ವ್ಯಾಪ್ತಿಯ ಜಿಲ್ಲಾ ಅಧಿಕಾರಿಗಳೊಡನೆ ವ್ಯವಹರಿಸಿ, ಹಾಗೂ ಸಿಂಧುತ್ವ ಪ್ರಮಾಣ ಪತ್ರವನ್ನು ತುರ್ತಾಗಿ ಪಡೆಯಲು ಕ್ರಮ ಕೈಗೊಳ್ಳುವುದು.

7) ದ್ವಿತೀಯ ದರ್ಜೆ ಲೆಕ್ಕ ಸಹಾಯಕರ ಹುದ್ದೆಗೆ ನೇರ ನೇಮಕಾತಿ ಮಾಡಲು ಈ ಕೆಳಗಿನಂತೆ ವೇಳಾ ಪಟ್ಟಿ ನಿಗದಿಪಡಿಸಿದೆ.

**ವೇಳಾ ಪಟ್ಟಿ**

| ಕ್ರಸಂ. | ದಿನಾಂಕ | ತೆಗೆದುಕೊಳ್ಳಬೇಕಾದ ಕ್ರಮ |
|---|---|---|
| 1 | 16.06.2014 | ಈಗಾಗಲೇ ಕರ್ನಾಟಕ ಲೋಕ ಸೇವಾ ಆಯೋಗದಿಂದ ಆಯ್ಕೆ ಪಟ್ಟಿಯನ್ನು ಜಿಲ್ಲಾ ಪಂಚಾಯತಿಗಳಿಗೆ ಕಳುಹಿಸಲಾಗಿರುತ್ತದೆ. ಸ್ವೀಕರಿಸಿದ ತಕ್ಷಣ ಸಿಂಧುತ್ವ ಪ್ರಮಾಣ ಪತ್ರ ಪಡೆಯಲು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಇಲಾಖೆಗಳಿಗೆ ಪತ್ರ ಬರೆಯುವುದು. |
| 2 | 20-06-2014 ರಿಂದ 15-07-2014 ರವರೆಗೆ | ಸಿಂಧುತ್ವ ಪ್ರಮಾಣ ಪತ್ರವನ್ನು ಪಡೆಯಲು ಸಮಾಜ ಕಲ್ಯಾಣ ಇಲಾಖೆ, ಹಿಂದುಳಿದ ವರ್ಗಗಳ ಇಲಾಖೆ, ಅಲ್ಪಸಂಖ್ಯಾತರ ಕಲ್ಯಾಣ ಇಲಾಖೆ ಮತ್ತು ಪರಿಶಿಷ್ಟ ವರ್ಗಗಳ ಇಲಾಖೆಗಳ ಜಿಲ್ಲಾ ಮಟ್ಟದ ಅಧಿಕಾರಿಗಳ ಸಭೆಯನ್ನು ನಡೆಸಿ ಸ್ಥಳದಲ್ಲೇ ಸಿಂಧುತ್ವ ಪ್ರಮಾಣ ಪತ್ರ ಪಡೆಯಲು ಕ್ರಮ ವಹಿಸುವುದು. ಅಂತಿಮ ದಿನಾಂಕವನ್ನು ಅಗತ್ಯವಿದ್ದಲ್ಲಿ ದಿನಾಂಕ: 15.07.2014 ರವರೆಗೆ ವಿಸ್ತರಿಸುವುದು. |
| 3 | 16.07.2014 ಮತ್ತು 20.07.2014 | ಎಲ್ಲಾ ದಾಖಲಾತಿಗಳ ಅಂತಿಮ ಪರಿಶೀಲನೆ |
| 4 | 25.07.2014 | ಏಕ ಕಾಲದಲ್ಲಿ ಎಲ್ಲಾ ಜಿಲ್ಲಾ ಪಂಚಾಯಿತಿಗಳು ನೇಮಕಾತಿ ಆದೇಶವನ್ನು ಆಯ್ಕೆಯಾದ ಅಭ್ಯರ್ಥಿಗಳಿಗೆ ಕಳುಹಿಸುವುದು. |
| 5 | 10.08.2014 ರಿಂದ 14.08.2014 ರವರೆಗೆ | ಆಯ್ಕೆಯಾದ ಅಭ್ಯರ್ಥಿಗಳಿಗೆ ಗ್ರಾಮ ಪಂಚಾಯಿತಿಗಳಲ್ಲಿ ಕಾರ್ಯ ವರದಿ ಮಾಡಿಕೊಳ್ಳಲು ಆದೇಶಿಸುವುದು. |

ಈಗಾಗಲೇ ಸರ್ಕಾರಿ ಸೇವೆಯಲ್ಲಿದ್ದು, ನೇಮಕಾತಿ ನಿಯಮಾನುಸಾರ ಅರ್ಜಿ ಸಲ್ಲಿಸಿ ಆಯ್ಕೆಯಾಗಿರುವ ಅಭ್ಯರ್ಥಿಗಳು ತಮ್ಮ ಮಾತೃ ಇಲಾಖೆಯಿಂದ ಕರ್ತವ್ಯದಿಂದ ಮುಕ್ತಿಗೊಳ್ಳಲು ಕಾಲವಾಕಾಶ ಬೇಕಾಗಿರುವ ಪ್ರಕರಣಗಳಲ್ಲಿ ಸೇವೆಗೆ ಸೇರುವ ಅವಧಿಯಲ್ಲಿ ರಿಯಾಯಿತಿ ನೀಡಬಹುದಾಗಿರುತ್ತದೆ.

ಮೇಲೆ ತಿಳಿಸಿರುವ ಸೂಚನೆಯನ್ವಯ ಎಲ್ಲಾ ದಾಖಲಾತಿಗಳನ್ನು ಪರಿಶೀಲಿಸಿದ ನಂತರ ನೇಮಕಾತಿ ಆದೇಶವನ್ನು ಹೊರಡಿಸುವುದು. ಕಾರ್ಯವರದಿ ಮಾಡಿಕೊಂಡ ನಂತರ ತದನಂತರ ಮೈಸೂರಿನ ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯು ಈ ಹೊಸ ಅಭ್ಯರ್ಥಿಗಳಿಗೆ ಆಯೋಜಿಸುವ 12 ವಾರದ ತರಬೇತಿಗೆ ನಿಯೋಜಿಸಬೇಕಾಗಿದೆ. ಈ ಸಂಬಂಧ ಪ್ರತ್ಯೇಕವಾದ ನಿರ್ದೇಶನವನ್ನು ಅಬ್ದುಲ್ ನಜೀರ್ ಸಾಬ್ ರಾಜ್ಯ ಗ್ರಾಮೀಣಾಭಿವೃದ್ಧಿ ಸಂಸ್ಥೆಯಿಂದ ಹೊರಡಿಸಲಾಗುವುದು.

ದ್ವಿತೀಯ ದರ್ಜೆ ಲೆಕ್ಕ ಸಹಾಯಕರುಗಳಿಗೆ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಕಂಪ್ಯೂರೀಕೃತ ಕೌನ್ಸಿಲಿಂಗ್ ಮೂಲಕ ಗ್ರಾಮ ಪಂಚಾಯತಿಗಳಿಗೆ ಸ್ಥಳ ನಿಯುಕ್ತಿಗೊಳಿಸುವಾಗ ಈ ಕೆಳಕಂಡ ಅಂಶಗಳನ್ನು ಕಡ್ಡಾಯವಾಗಿ ಪಾಲಿಸುವಂತೆ ಕೋರಿದೆ.

1. ಜಿಲ್ಲೆಗೆ ಹಂಚಿಕೆಯಾಗಿರುವ ಹುದ್ದೆಗಳಿಗಷ್ಟೆ ಸ್ಥಳಗಳನ್ನು ಗುರುತಿಸುವುದು ಖಾಲಿ ಇರುವ ಗ್ರಾಮ ಪಂಚಾಯತಿಗಳನ್ನು ಗುರುತಿಸುವಾಗ ಸಂಬಂಧಿಸಿದ ತಾಲ್ಲೂಕುಗಳ ಕಾರ್ಯನಿರ್ವಾಹಕ ಅಧಿಕಾರಿಗಳು ಮತ್ತು ತಿಳುವಳಿಕೆ ಇರುವ ವ್ಯಕ್ತಿಗಳ ಸಲಹೆಯನ್ನು ಪಡೆಯುವುದು. ಒಂದೇ ಬಾರಿಗೆ ಒಂದೇ ಗುಂಪಿನಲ್ಲಿ ಒಂದೇ ಹಂತದಲ್ಲಿ ಅಥವಾ ಒಂದೇ ಗುಂಪಿನಲ್ಲಿ ಕೌನ್ಸಿಲಿಂಗ್ ಮೂಲಕ ಸ್ಥಳಗಳನ್ನು ಗುರುತಿಸುವಂತೆ ಅವಕಾಶ ಕಲ್ಪಿಸುವುದು.
2. ಮೊದಲು ಖಾಲಿ ಇರುವ ಗ್ರೇಡ್-1 ಗ್ರಾಮ ಪಂಚಾಯತಿಗಳಿಗೆ ಕಡ್ಡಾಯವಾಗಿ ಸ್ಥಳ ನಿಯುಕ್ತಿಗೊಳಿಸಲು **ಮೊದಲ ಆದ್ಯತೆ** ಕಲ್ಪಿಸುವುದು.
3. ನಂತರ ಗ್ರೇಡ್-2 ಗ್ರಾಮ ಪಂಚಾಯತಿ ಕಾರ್ಯದರ್ಶಿಗಳು ಪಂಚಾಯ್ತಿ ಅಭಿವೃದ್ಧಿ ಅಧಿಕಾರಿ ಹುದ್ದೆಯಲ್ಲಿ ಪ್ರಭಾರದಲ್ಲಿರುವ ಖಾಲಿ ಇರುವ ಗ್ರೇಡ್-2 ಗ್ರಾಮ ಪಂಚಾಯತಿಗಳಿಗೆ ಸ್ಥಳ ನಿಯುಕ್ತಿಗೊಳಿಸಲು **ಎರಡನೇ ಆದ್ಯತೆ** ಕಲ್ಪಿಸುವುದು. ಈ ರೀತಿ ಆದ್ಯತೆ ಕಲ್ಪಿಸುವಾಗ ಈಗಾಗಲೇ ಹಣಕಾಸು ದುರುಪಯೋಗ (ಇಲಾಖಾ ವಿಚಾರಣೆ ನಡೆಯುತ್ತಿರುವ ಗ್ರಾಮ ಪಂಚಾಯತಿಗಳು) ದುರುಪಯೋಗವಾಗಿರುವ ಗ್ರಾಮ ಪಂಚಾಯತಿಗಳಿಗೆ ಮೊದಲ ಆದ್ಯತೆ ನೀಡಿ ಅವುಗಳಿಗೆ ಸ್ಥಳನಿಯುಕ್ತಿಗೊಳಿಸುವುದು.
4. ಅಂಗವಿಕಲರಲ್ಲಿ (ಪುರಷ/ಮಹಿಳಾ) ಅಂಧ / ದೃಷ್ಟಿಮಾಂದ್ಯ ಅಭ್ಯರ್ಥಿಗಳಿಗೆ **ಮೊದಲ ಆದ್ಯತೆ** ನಂತರ ಶ್ರವಣದೋಷ, ಚಲನವೈಕಲ್ಯ ಅಭ್ಯರ್ಥಿಗಳಿಗೆ ಆದ್ಯತೆ ನೀಡತಕ್ಕದ್ದು.
5. ಮಹಿಳಾ ಅಭ್ಯರ್ಥಿಗಳಿಗೆ **2ನೇ ಆದ್ಯತೆ** ನೀಡತಕ್ಕದ್ದು.
6. ಮಾಜಿ ಸೈನಿಕ ಅಭ್ಯರ್ಥಿಗಳಿಗೆ **3ನೇ ಆದ್ಯತೆ** ನೀಡತಕ್ಕದ್ದು.
7. ಪುರಷ ಅಭ್ಯರ್ಥಿಗಳಿಗೆ **4ನೇ ಆದ್ಯತೆ** ನೀಡತಕ್ಕದ್ದು.

ತಮ್ಮ ವಿಶ್ವಾಸಿ,

17/6/14

(ಕೆ. ಯಾಲಕ್ಕಿಗೌಡ)
ನಿರ್ದೇಶಕರು (ಪಂ.ರಾಜ್) ಹಾಗೂ
ಪದನಿಮಿತ್ತ ಸರ್ಕಾರದ ಜಂಟಿ ಕಾರ್ಯದರ್ಶಿ
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ.